# ಕರ್ನಾಟಕ ಪಂಚಾಯತ್ ರಾಜ್ ಆಯುಕ್ತಾಲಯದ ನಡವಳಿಗಳು

**ವಿಷಯ:** 2023-24 ನೇ ಸಾಲಿಗೆ ರಾಜ್ಯದ ಎಲ್ಲಾ ಗ್ರಾಮ ಪಂಚಾಯಿತಿಗಳ ಚುನಾಯಿತ ಪ್ರತಿನಿಧಿಗಳಿಗೆ ಆಗಸ್ಟ- 2023 ರಿಂದ ನವೆಂಬರ್- 2023 ರ ವರೆಗಿನ ಅವಧಿಗೆ ಎರಡನೇ ಕಂತಿನ ಗೌರವಧನ ಬಿಡುಗಡೆಗೊಳಿಸುವ ಕುರಿತು.

**ಓದಲಾಗಿದೆ:1.** 2023-24 ನೇ ಸಾಲಿನ ಆಯವ್ಯಯದನ್ವಯ ಆರ್ಥಿಕ ಇಲಾಖೆಯು ನಿಗದಿಪಡಿಸಿದಂತೆ.

**2.** ಸರ್ಕಾರದ ಆದೇಶ ಸಂಖ್ಯೆ: ಗ್ರಾಅಪಂರಾ 126 ಜಿಪಸ 2022, ದಿನಾಂಕ:18.12.2022

******

**ಪ್ರಸ್ತಾವನೆ:**

ರಾಜ್ಯದ ಎಲ್ಲಾ ಗ್ರಾಮ ಪಂಚಾಯತಿಗಳ ಚುನಾಯಿತ ಪ್ರತಿನಿಧಿಗಳಿಗೆ ಗೌರವಧನ ಬಿಡುಗಡೆ ಮಾಡುವ ಸಂಬಂಧ (1) ರಲ್ಲಿ 2023-24 ನೇ ಆರ್ಥಿಕ ಸಾಲಿನಲ್ಲಿ ಲೆಕ್ಕಶೀರ್ಷಿಕೆ: 2515-00-198-1-11-300ರಡಿ ಆಯವ್ಯಯದಲ್ಲಿ ₹.27378.24 ಲಕ್ಷಗಳ ಅನುದಾನವನ್ನು ಕಾಯ್ದಿರಿಸಲಾಗಿದೆ. ಓದಲಾದ (2)ರ ಆದೇಶದನ್ವಯ, ಗ್ರಾಮ ಪಂಚಾಯತಿಗಳ ಅಧ್ಯಕ್ಷರುಗಳಿಗೆ ಮಾಹೆಯಾನ ₹.6000/- ಉಪಾಧ್ಯಕ್ಷರುಗಳಿಗೆ ₹.4000/- ಹಾಗೂ ಸದಸ್ಯರುಗಳಿಗೆ ₹.2000/-ಗಳ ಗೌರವಧನ ನಿಗದಿಪಡಿಸಲಾಗಿದೆ.

ಅದರಂತೆ, ರಾಜ್ಯದ ಎಲ್ಲಾ ಗ್ರಾಮ ಪಂಚಾಯತಿಗಳ ಚುನಾಯಿತ ಪ್ರತಿನಿಧಿಗಳಿಗೆ ಆಗಸ್ಟ- 2023 ರಿಂದ ನವೆಂಬರ್- 2023 ರ ವರೆಗಿನ ಅವಧಿಗೆ ಎರಡನೇ ಕಂತಿನ ಗೌರವಧನವನ್ನು 2023-24ನೇ ಸಾಲಿಗೆ ಲೆಕ್ಕ ಶೀರ್ಷಿಕೆ: 2515-00-198-1-11-300ರಡಿ ನಿಗದಿಪಡಿಸಿರುವ ಅನುದಾನದಲ್ಲಿ ₹.**8937.28**/- ಲಕ್ಷ (ಎಂಟು ಸಾವಿರದ ಒಂಭೈನೂರಾ ಮುವ್ವತ್ತೇಳು ಲಕ್ಷ ಇಪ್ಪತ್ತೆಂಟು ಸಾವಿರ ರೂಪಾಯಿಗಳು ಮಾತ್ರ)ಗಳನ್ನು ಲಗತ್ತಿಸಲಾದ ಅನುಬಂಧದನ್ವಯ ನಿಗದಿ ಪಡಿಸಲಾಗಿರುವಂತೆ ಬಿಡುಗಡೆಗೊಳಿಸಬೇಕಾಗಿರುತ್ತದೆ. ಅದರಂತೆ ಈ ಕೆಳಕಂಡ ಆದೇಶ.

## ಸರ್ಕಾರದ ಆದೇಶ ಸಂಖ್ಯೆ: ಕಪಂರಾಆ/ಅಭಿವೃದ್ಧಿ/304/ಸ.ಗೌ.ಧ/2023, ಬೆಂಗಳೂರು ದಿನಾಂಕ: 07.11.2023

ಪ್ರಸ್ತಾವನೆಯಲ್ಲಿ ವಿವರಿಸಿರುವ ಅಂಶಗಳ ಹಿನ್ನೆಲೆಯಲ್ಲಿ, 2023-24ನೇ ಸಾಲಿಗೆ ಆರ್ಥಿಕ ವರ್ಷದ ಆಗಸ್ಟ- 2023 ರಿಂದ ನವೆಂಬರ್- 2023 ರವರೆಗಿನ ಅವಧಿಗೆ ಮಾತ್ರ ಅನ್ವಯಿಸುವಂತೆ ರಾಜ್ಯದ ಎಲ್ಲಾ ಗ್ರಾಮ ಪಂಚಾಯತಿಗಳ ಚುನಾಯಿತ ಪ್ರತಿನಿಧಿಗಳಾದ ಅಧ್ಯಕ್ಷರು, ಉಪಾಧ್ಯಕ್ಷರು ಹಾಗೂ ಸದಸ್ಯರುಗಳಿಗೆ ಲೆಕ್ಕ ಶೀರ್ಷಿಕೆ: 2515-00-198-1-11-300ರಡಿ ಲಭ್ಯವಿರುವ ₹.27378.24 ಲಕ್ಷಗಳ ಅನುದಾನದಲ್ಲಿ, ಅನುದಾನದಲ್ಲಿ ₹.**8937.28**/- ಲಕ್ಷ(ಎಂಟು ಸಾವಿರದ ಒಂಭೈನೂರಾ ಮುವ್ವತ್ತೇಳು ಲಕ್ಷ ಇಪ್ಪತ್ತೆಂಟು ಸಾವಿರ ರೂಪಾಯಿಗಳು ಮಾತ್ರ)ಗಳನ್ನು ಲಗತ್ತಿಸಲಾದ ಅನುಬಂಧದನ್ವಯ ಈ ಕೆಳಕಾಣಿಸಿದ ಷರತ್ತಿಗೊಳಪಟ್ಟು, ಗೌರವಧನ ಬಿಡುಗಡೆಗೊಳಿಸಲು ಆದೇಶಿಸಿದೆ.

### ಮಾಸಿಕ ಗೌರವಧನದ ಮೊತ್ತಗಳನ್ನು ಚುನಾಯಿತ ಪ್ರತಿನಿಧಿಗಳಿಗೆ ಈ ಕೆಳಕಂಡ ಷರತ್ತಿಗೊಳಪಟ್ಟು ಪಾವತಿಸುವುದು.

1. ಗ್ರಾಮ ಪಂಚಾಯಿತಿ ಚುನಾಯಿತ ಪ್ರತಿನಿಧಿಗಳಿಗೆ ಬಿಡುಗಡೆಗೊಳಿಸಿರುವ ಮಾಸಿಕ ಗೌರವ ಧನದ ಪಂಚಾಯಿತಿವಾರು ಮೊತ್ತಗಳನ್ನು ಈ ಆದೇಶದೊಂದಿಗೆ ಲಗತ್ತಿಸಿದ ಅನುಬಂಧದಲ್ಲಿ ನೀಡಿದೆ. ಗ್ರಾಮ ಪಂಚಾಯಿತಿವಾರು ಗೌರವಧನದ ಮೊತ್ತಗಳನ್ನು ಅನುಬಂಧದಲ್ಲಿರುವಂತೆ, ಗ್ರಾಮ ಪಂಚಾಯಿತಿ ಸದಸ್ಯರ ಗೌರವಧನ ಬ್ಯಾಂಕ್ ಖಾತೆಗಳಿಗೆ ಖಜಾನೆ-2 ರಿಂದ BMS ಮಾಡ್ಯೂಲ್ ಮೂಲಕ ನೇರವಾಗಿ ಬಿಡುಗಡೆ ಮಾಡುವುದು.

2. ಈ ಆದೇಶದ ಮೂಲಕ ಬಿಡುಗಡೆಗೊಳಿಸಿದ ಮೊತ್ತಗಳನ್ನು ಗ್ರಾಮ ಪಂಚಾಯತಿಗಳ ಚುನಾಯಿತ ಪ್ರತಿನಿಧಿಗಳ ಆಗಸ್ಟ -2023 ರಿಂದ ನವೆಂಬರ್ - 2023 ರವರೆಗಿನ ಗೌರವಧನ ಪಾವತಿಸಲು ಮಾತ್ರ ವಿನಿಯೋಗಿಸುವುದು. ಅನ್ಯ ಉದ್ದೇಶಕ್ಕಾಗಿ ವಿನಿಯೋಗಿಸ ತಕ್ಕದ್ದಲ್ಲ.

3. ನಿಗಧಿತ ಅವಧಿಯೊಳಗೆ ಗೌರವಧನ ಬಿಡುಗಡೆಗೊಳಿಸಿರುವ ಕುರಿತು ಸರ್ಕಾರಕ್ಕೆ ವರದಿ ಸಲ್ಲಿಸುವುದು ಹಾಗೂ ಗೌರವಧನದ ಅನುದಾನವು Scale based budget ಆಗಿರುವುದರಿಂದ ಆಯಾ ವರ್ಷದ ಅನುದಾನವನ್ನು ಆಯಾ ವರ್ಷದಲ್ಲಿಯೇ ವಿನಿಯೋಗಿಸಬೇಕಾಗಿದ್ದು, ಸದರಿ ಆರ್ಥಿಕ ಸಾಲಿನಲ್ಲಿ ಬಿಡುಗಡೆಯಾದ ಗೌರವಧನಕ್ಕೆ ಸಂಬಂಧಿತ ಯಾವುದೇ ವಿಚಾರಣೆಗಳಿದ್ದಲ್ಲಿ ಬಿಡುಗಡೆಗೊಳಿಸಿದ 15 ದಿನಗಳೊಳಗಾಗಿ ಸರ್ಕಾರಕ್ಕೆ ಪ್ರಸ್ತಾವನೆಗಳನ್ನು ಸಲ್ಲಿಸತಕ್ಕದ್ದು.

ಈ ಆದೇಶವನ್ನು ಆರ್ಥಿಕ ಇಲಾಖೆಯ ಆದೇಶ ಸಂಖ್ಯೆ:FD 07 TFP 2023, ದಿನಾಂಕ: 31.07.2023 ರಂತೆ ಹೊರಡಿಸಲಾಗಿದೆ.

**( ಆಯುಕ್ತರು, ಪಂ.ರಾಜ್ ಆಯುಕ್ತಾಲಯ ರವರಿಂದ ಅನುಮೋದಿತ).**

ನಿರ್ದೇಶಕರು (ಅಭಿವೃದ್ಧಿ),
ಕರ್ನಾಟಕ ಪಂಚಾಯತ್ ರಾಜ್ ಆಯುಕ್ತಾಲಯ,
ಬೆಂಗಳೂರು.

**ಇವರಿಗೆ**

1. ಪ್ರಧಾನ ಮಹಾಲೇಖಪಾಲರು (ಜಿ ಅಂಡ್ ಎಸ್ ಎಸ್ ಎ), ಕರ್ನಾಟಕ, ಹೊಸ ಕಟ್ಟಡ, ಆಡಿಟ್ ಭವನ (ಪಿ.ಬಿ.ನಂ.5398) ಬೆಂಗಳೂರು.
2. ಪ್ರಧಾನ ಮಹಾಲೇಖಪಾಲರು (ಇ ಅಂಡ್ ಆರ್ ಎಸ್ ಎ), ಕರ್ನಾಟಕ, ಹೊಸ ಕಟ್ಟಡ, ಆಡಿಟ್ ಭವನ (ಪಿ.ಬಿ.ನಂ.5398) ಬೆಂಗಳೂರು.
3. ಪ್ರಧಾನ ಮಹಾಲೇಖಪಾಲರು (ಎ ಅಂಡ್ ಇ), ಕರ್ನಾಟಕ, ಪಾರ್ಕ್ ಹೌಸ್ ರಸ್ತೆ (ಪಿ.ಬಿ.ನಂ.5329) ಬೆಂಗಳೂರು.
4. ರಾಜ್ಯದ ಎಲ್ಲಾ ಜಿಲ್ಲಾ ಪಂಚಾಯತಿಗಳ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು.
5. ನಿರ್ದೇಶಕರು, ರಾಜ್ಯ ಹುಜೂರ್ ಖಜಾನೆ, ಬೆಂಗಳೂರು.
6. ನಿರ್ದೇಶಕರು(ಅಭಿವೃದ್ಧಿ), ಕರ್ನಾಟಕ ಪಂಚಾಯತ್‌ರಾಜ್ ಆಯುಕ್ತಾಲಯ, ಬೆಂಗಳೂರು
7. ಉಪ ನಿರ್ದೇಶಕರು, ಖಜಾನೆ ಗಣಕ ಜಾಲ ನಿರ್ವಹಣಾ ಕೇಂದ್ರ, ಖನಿಜ ಭವನ, ಬೆಂಗಳೂರು.
8. ಜಿಲ್ಲಾ ಖಜಾನಾಧಿಕಾರಿಗಳು, ರಾಜ್ಯದ ಎಲ್ಲಾ ಜಿಲ್ಲೆಗಳು.
9. ವಿಶೇಷಾಧಿಕಾರಿ, ಆರ್ಥಿಕ ಇಲಾಖೆ (ವೆಚ್ಚ-6), ವಿಧಾನ ಸೌಧ, ಬೆಂಗಳೂರು.
10. ಆಂತರಿಕ ಆರ್ಥಿಕ ಸಲಹೆಗಾರರು, ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ, ಬೆಂಗಳೂರು.
11. ಆರ್ಥಿಕ ಅಧಿಕಾರಿ, ಲೆಕ್ಕ ಪತ್ರ ಶಾಖೆ, ಕರ್ನಾಟಕ ಪಂಚಾಯತ್ ರಾಜ್ ಆಯುಕ್ತಾಲಯ, ಬೆಂಗಳೂರು.
12. ರಾಜ್ಯದ ಎಲ್ಲಾ ತಾಲ್ಲೂಕು ಪಂಚಾಯತಿಗಳ ಕಾರ್ಯನಿರ್ವಾಹಕ ಅಧಿಕಾರಿಗಳು - (ಜಿಲ್ಲಾ ಪಂಚಾಯತಿಗಳ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳ ಮೂಲಕ).
13. ರಾಜ್ಯದ ಎಲ್ಲಾ ಗ್ರಾಮ ಪಂಚಾಯತಿಗಳ ಪಂಚಾಯತಿ ಅಭಿವೃದ್ಧಿ ಅಧಿಕಾರಿಗಳು (ಆಯಾ ತಾಲ್ಲೂಕು ಪಂಚಾಯತಿ ಕಾರ್ಯನಿರ್ವಾಹಕ ಅಧಿಕಾರಿಗಳ ಮೂಲಕ).
14. ಗಣಕ ಕೋಶ - ಇಲಾಖಾ ವೆಬ್‌ಸೈಟ್‌ನಲ್ಲಿ ಅಳವಡಿಸಲು
15. ಮುಖ್ಯ ಸಂಪಾದಕರು, ಕರ್ನಾಟಕ ವಿಕಾಸ ಮಾಸ ಪತ್ರಿಕೆ – ಮುಂದಿನ ಸಂಚಿಕೆಯಲ್ಲಿ ಪ್ರಕಟಿಸಲು.

**ಪ್ರತಿಯನ್ನು:**

1. ಅಪರ ಮುಖ್ಯ ಕಾರ್ಯದರ್ಶಿ (ಪಂ.ರಾಜ್) ರವರ ಆಪ್ತ ಕಾರ್ಯದರ್ಶಿ, ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ, ಬಹುಮಹಡಿಗಳ ಕಟ್ಟಡ, ಬೆಂಗಳೂರು.

2. ಪ್ರಧಾನ ಕಾರ್ಯದರ್ಶಿ ರವರ ಆಪ್ತ ಕಾರ್ಯದರ್ಶಿ, ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ, ಬಹುಮಹಡಿಗಳ ಕಟ್ಟಡ, ಬೆಂಗಳೂರು.
3. ಆಯುಕ್ತರು, ಕರ್ನಾಟಕ ಪಂಚಾಯತ್ ರಾಜ್ ಆಯುಕ್ತಾಲಯ, ರವರ ಆಪ್ತ ಸಹಾಯಕರು, ಬೆಂಗಳೂರು.
4. ಶಾಖಾ ರಕ್ಷಾ, ಕಡತಕ್ಕೆ/ಹೆಚ್ಚುವರಿ ಪ್ರತಿ.